NO. BDA/EM/EO-1/TA-2/OC/T-39 /2019-20 Dated: 30-04-2019

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ಬೆಂಗಳೂರು

ಅನುಸೂಚಿ-9

(ಉಪವಿಧಿ ಸಂಖ್ಯೆ: 5.5.1)

## ಸ್ವಾಧೀನಪಡಿಸಿಕೊಳ್ಳಲು ಅನುಮತಿ ಪತ್ರ

ಇವರಿಗೆ,

**M/s VBHC Mumbai Value Homes Pvt Ltd.,**
**HM Staford House, # 29/5, 4th Floor, 7th Cross,**
**Vasantha Nagar Extension, Off Millers Road,**
**Bangalore – 560 052.**

ಮಾನ್ಯರೇ,

**ವಿಷಯ:** ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ದೊಡ್ಡಬೆಲೆ ಗ್ರಾಮದ ಸರ್ವೆ ನಂ. 25(ಪಿ), 28/1, 28/2, 29/4, 29/6, 29/7, 29/9, 29/10, 29/11, 29/12, 29/13, 29/14, 29/15, 32/1ಎ ರಲ್ಲಿ ನಿರ್ಮಿಸಿರುವ 'ಬ್ಲಾಕ್-ಸಿ' ಬಹುವಸತಿ ಸಮುಚ್ಛಯ ಕಟ್ಟಡಕ್ಕೆ ಸ್ವಾಧೀನಾನುಭವ ಪತ್ರ ನೀಡುವ ಕುರಿತು.

**ಉಲ್ಲೇಖ:** 1) ನಿಮ್ಮ ಅರ್ಜಿ ದಿನಾಂಕ: 12–04–2019.
2) ಮಾನ್ಯ ಆಯುಕ್ತರ ಆದೇಶ ಸಂಖ್ಯೆ: 195, ದಿನಾಂಕ: 22-04-2019.

*****

ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ದೊಡ್ಡಬೆಲೆ ಗ್ರಾಮದ ಸರ್ವೆ ನಂ. 25(ಪಿ), 28/1, 28/2, 29/4, 29/6, 29/7, 29/9, 29/10, 29/11, 29/12, 29/13, 29/14, 29/15, 32/1ಎ ರಲ್ಲಿ ನಿರ್ಮಿಸಿರುವ 'ಬ್ಲಾಕ್-ಸಿ' ಬಹುವಸತಿ ಸಮುಚ್ಛಯ ಕಟ್ಟಡಕ್ಕೆ ಸ್ವಾಧೀನಾನುಭವ ಪತ್ರ ನೀಡುವ ಕುರಿತು ನೀವು ಉಲ್ಲೇಖ (1) ರಲ್ಲಿ ಅರ್ಜಿ ಸಲ್ಲಿಸಿರುತ್ತೀರಿ. ಸದರಿ ಕಟ್ಟಡ ನಿರ್ಮಾಣಗೊಂಡ ಹಾಗೂ ಪೂರ್ಣಗೊಂಡಿರುವ ಬಗ್ಗೆ ಕಾರ್ಯಪಾಲಕ ಅಭಿಯಂತರರು, ದಕ್ಷಿಣ ವಿಭಾಗ ರವರು ಸ್ಥಳ ಪರಿವೀಕ್ಷಣೆ ನಡೆಸಿದ್ದು ಅವರ ವರದಿಗೆ ಅಭಿಯಂತರ ಅಧಿಕಾರಿ-1, ಬೆಂ.ಅ.ಪ್ರಾ., ಅವರು ಒಪ್ಪಿದ ತನಿಖಾ ವರದಿಯ ಆಧಾರದ ಮೇಲೆ ಈ ಕೆಳಕಂಡಂತೆ ನಿರ್ಮಿಸಿರುವ ಬಹುವಸತಿ ಸಮುಚ್ಛಯ ಕಟ್ಟಡದ ನಿರ್ಮಾಣ ಕಾರ್ಯ ಪೂರ್ಣಗೊಂಡಿರುವುದು ನನಗೆ ಮನವರಿಕೆಯಾಗಿದೆ.

| Building Details | No. of Floors | No. of Units |
|---|---|---|
| Residential Building (Block-C) | BF+GF+20UF | 1BHK = 140<br>2BHK = 260<br>EWS = 80 |
| **TOTAL** | | **480 Units** |

ಆದ್ದರಿಂದ, ಸದರಿ 'ಬ್ಲಾಕ್-ಸಿ' ಬಹುವಸತಿ ಸಮುಚ್ಛಯ ಕಟ್ಟಡಕ್ಕೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮಾನ್ಯ **ಆಯುಕ್ತರು, ಕಛೇರಿ ಆದೇಶ ಸಂಖ್ಯೆ: 195, ದಿನಾಂಕ: 22-04-2019** ರಂತೆ ಸ್ವಾಧೀನಾನುಭವ ಪತ್ರ ನೀಡಲು ಅನುಮೋದನೆ ನೀಡಿರುತ್ತಾರೆ. ಆದ್ದರಿಂದ ಈ ಕೆಳಗೆ ನಮೂದಿಸಿರುವ ಷರತ್ತುಗಳನ್ನು ಪಾಲಿಸುವ ನಿಬಂಧನೆಗಳಿಗೊಳಪಟ್ಟು ಕಟ್ಟಡವನ್ನು ಸ್ವಾಧೀನಪಡಿಸಿಕೊಳ್ಳಲು ಈ ಮೂಲಕ ನಾನು ಅನುಮತಿ ನೀಡಿದ್ದೇನೆ.

### ಪಾಲಿಸಬೇಕಾದ ಷರತ್ತುಗಳು

1) ವಾಹನ ನಿಲುಗಡೆ ಪ್ರದೇಶವು ಸಂಪೂರ್ಣ ಸುರಕ್ಷತೆಯಿಂದ ಕೂಡಿದ್ದು, ವಾಹನ ನಿಲುಗಡೆಗೆ ಮಾತ್ರ ಉಪಯೋಗಿಸತಕ್ಕದ್ದು.

2) ಬಳಸುವ ನೀರಿಗಾಗಿ ಮಳೆನೀರು ಕೊಯ್ಲು ವ್ಯವಸ್ಥೆಯನ್ನು ಉತ್ತಮ ರೀತಿಯಿಂದ ನಿರ್ವಹಿಸಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು.

3) ಅಭಿವೃದ್ಧಿದಾರರು ಕಟ್ಟಡ ಸ್ವಾಧೀನಪಡಿಸಿಕೊಂಡ ನಂತರ, ಬಿಬಿಎಂಪಿ/ Statutory Bodies/ ಬಿಡಿಎ ಕಛೇರಿ ಇನ್ನಾವುದೇ ಶುಲ್ಕ ವಿಧಿಸದಿದ್ದಲ್ಲಿ ಅದನ್ನು ಸಂದಾಯ ಮಾಡತಕ್ಕದ್ದು.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

..2

4) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ಶುದ್ಧೀಕರಣ ಘಟಕವನ್ನು (S.T.P) ಯಾವಾಗಲೂ ಸುಸ್ಥಿತಿಯಲ್ಲಿಡುವುದು ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening, ಗಿಡಮರ ಹಾಗೂ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ Sewage ಅನ್ನು ಹೊರಗಡೆ ಬಿಡತಕ್ಕದಲ್ಲ.

5) ಅರ್ಜಿದಾರರು ಕಟ್ಟಡಕ್ಕೆ ಬೇಕಾದ ವಿದ್ಯುಚ್ಛಕ್ತಿಯ ಪರ್ಯಾಯ ವ್ಯವಸ್ಥೆಗಾಗಿ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

6) ಕಟ್ಟಡದ ನಿರ್ಮಾಣ ವೆಚ್ಚವು ಪ್ರತೀ ಚದರ ಅಡಿಗೆ 650/- ಕ್ಕಿಂತ ಹೆಚ್ಚಾದಲ್ಲಿ ಕಾರ್ಮಿಕ ಕಲ್ಯಾಣ ನಿಧಿಗೆ ಅಂದಾಜು ಮೊತ್ತದ ಶೇ 1% ರಷ್ಟು ಮೊತ್ತವನ್ನು ಪ್ರಾಧಿಕಾರಕ್ಕೆ ಭರಿಸತಕ್ಕದ್ದು.

7) ಕಟ್ಟಡದ ಗುಣಮಟ್ಟ, ಸುರಕ್ಷತೆ ಹಾಗೂ ವಿನ್ಯಾಸಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಅಂಶಗಳ ಪೂರ್ಣ ಜವಾಬ್ದಾರಿಯು ಅಭಿವೃದ್ಧಿದಾರರದ್ದೇ ಆಗಿರುತ್ತದೆ.

8) ಅರ್ಜಿದಾರರು ಕಟ್ಟಡದ ಸ್ವಾಧೀನಾನುಭವ ಪತ್ರ ಪಡೆಯಲು ತಪ್ಪು ದಾಖಲೆಗಳನ್ನೇನಾದರು ಸಲ್ಲಿಸಿರುವುದು ಕಂಡುಬಂದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ಸ್ವಾಧೀನಾನುಭವ ಪತ್ರವನ್ನು ರದ್ದುಪಡಿಸಲಾಗುವುದು.

9) ಅರ್ಜಿದಾರರು ನೀರು ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅವಲಂಬಿಸದೆ ನೀರಿಗಾಗಿ ತಮ್ಮ ಸ್ವಂತ ವ್ಯವಸ್ಥೆ ಮಾಡಿಕೊಳ್ಳುವುದು.

10) ಅರ್ಜಿದಾರರು KSPCB ಸಂಸ್ಥೆಯಿಂದ ಪಡೆದಿರುವ CFO ಪತ್ರದಲ್ಲಿನ ಷರತ್ತುಗಳನ್ನು ಪಾಲಿಸುವುದು.

11) ಅಭಿವೃದ್ಧಿದಾರರು ಯೋಜನೆಯ ಒಳಾಂಗಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

12) ಅಭಿವೃದ್ಧಿದಾರರು ಬೆಟರ್ ಮೆಂಟ್ ತೆರಿಗೆ ಪಾವತಿಸುವ ಕುರಿತು ಮಾನ್ಯ ಉಚ್ಛ ನ್ಯಾಯಾಲಯದ ನೀಡುವ 45727-45730/2011 (ಬೆಂಅಪ್ರಾ), ದಿನಾಂಕ: 03.09.2012ರ ತೀರ್ಮಾನದ ವಿರುದ್ಧ ಪ್ರಾಧಿಕಾರವು ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿದ್ದು, ಮೇಲ್ಮನವಿಯ ಕುರಿತು ನ್ಯಾಯಾಲಯ ನೀಡುವ ತೀರ್ಪಿಗೆ ಬದ್ಧರಾಗಿರಲು ಷರತ್ತಿಗೆ ಒಳಪಡಿಸಲಾಗಿದೆ.

13) ಅರ್ಜಿದಾರರು ಯಾವುದೇ ರೀತಿಯ ಪ್ಲಾಸ್ಟಿಕ್, ಪೇಪರ್, ಗಾರ್ಬೇಜ್ ಇತ್ಯಾದಿಗಳನ್ನು ಸಂಗ್ರಹಿಸಿ Dry waste ಮತ್ತು Wet waste ಬೇರ್ಪಡಿಸಿ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

14) ಅರ್ಜಿದಾರರು ಭದ್ರತಾ ಸಿಬ್ಬಂಧಿಯವರನ್ನು ನೇಮಿಸಿ ಕಟ್ಟಡದ ಪ್ರವೇಶ ದ್ವಾರದಲ್ಲಿ ಒಳಬರುವ ಹಾಗೂ ಹೊರಹೋಗುವ ವಾಹನಗಳಿಗೆ ಪ್ರತ್ಯೇಕ ವ್ಯವಸ್ಥೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳುವುದು.

15) ಹಸಿರು ನ್ಯಾಯಾಧಿಕರಣವು (NGT) ಆಗಿಂದಾಗ್ಗೆ ಹೊರಡಿಸುವ / ವಿಧಿಸುವ ಯಾವುದೇ ಷರತ್ತುಗಳಿಗೆ ಅರ್ಜಿದಾರರು ಬದ್ಧರಾಗಿರತಕ್ಕದ್ದು ಹಾಗೂ ಪ್ರಶ್ನಿತ ಪ್ರದೇಶವು NGT ಆದೇಶದನ್ವಯ ಬಫರ್ ವಲಯದಲ್ಲಿ ಇರುವುದಾದಲ್ಲಿ ಸ್ವಾಧೀನಾನುಭವ ಪತ್ರವನ್ನು ಹಿಂಪಡೆಯುವ ಷರತ್ತಿಗೊಳಪಡಿಸಿದೆ.

16) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಷರತ್ತುಗಳಿಗೆ ಅರ್ಜಿದಾರರು ಭದ್ದರಾಗಿರತಕ್ಕದ್ದು.

ಮಂಜೂರಾತಿ ನೀಡುವವರ ಸಹಿ ಮತ್ತು ಹುದ್ದೆಯ ಹೆಸರು.
ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು (ದಕ್ಷಿಣ) ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.